**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 6856/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ**.02

**ದಿನಾಂಕಃ** 17.09.2025 **ಸಿಡಬ್ಲ್ಯೂ**.02

| | |
|---|---|
| ಹೆಸರು | ನಾಗರಾಜಪ್ಪ |
| ತಂದೆ ಹೆಸರು | ಮಲ್ಲಪ್ಪ |
| ವಯಸ್ಸು | 63 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ದೀಟೂರು ಗ್ರಾಮ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ. 1,3 ಮತ್ತು 4 ರವರ ಪರಿಚಯವಿದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಕೃತ್ಯ ನಡೆದ ಸ್ಥಳ ಮತ್ತು ಅಮಾನತು ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಿದ್ದು ಸಾಕ್ಷಿಯು ಗುರುತಿಸಿದ ಸಹಿಯನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ದಿಃ 24.03.2024 ರಂದು ಸಂಜೆ 6.30 ಗಂಟೆಗೆ ಚಾಸಾ.1 ಮತ್ತು 1 ನೇ ಆರೋಪಿಯ ನಡುವೆ ಜಗಳ ಆಗುತ್ತಿತ್ತು. ಆಗ ನಾನು ಬಂದು ಜಗಳವನ್ನು ಬಿಡಿಸಿದೆನು. ಚಾಸಾ.1 ಮತ್ತು 1 ನೇ ಆರೋಪಿ ಒಬ್ಬರಿಗೊಬ್ಬರು ಹೊಡೆದಾಡುತ್ತಿದ್ದರು. 1 ನೇ ಆರೋಪಿ ಮತ್ತು ಅವರ ಕಡೆಯವರು ಕೈ ಮತ್ತು ಕಲ್ಲಿನಿಂದ ಹೊಡೆಯುತ್ತಿದ್ದರು. 1 ನೇ ಆರೋಪಿಯೊಂದಿಗೆ ಇದ್ದವರು ಹೆಸರು ನನಗೆ ಗೊತ್ತಿಲ್ಲ. ಸದರಿ ಜಗಳದಲ್ಲಿ ಆರೋಪಿ ಚಾಸಾ.1ರವರಿಗೆ ಚಾಸಾ.1 ರವರು ಆರೋಪಿತರಿಗೆ ಅವಾಚ್ಯ ಶಬ್ದಗಳಿಂದ ಬೈಯುತ್ತಿದ್ದರು. ಗಲಾಟೆಯಾದ 2-3 ದಿನಗಳ ನಂತರ ಪೊಲೀಸರು ಸ್ಥಳಕ್ಕೆ ಬಂದಿದ್ದರು. ಪೊಲೀಸರು ಗಲಾಟೆ ಬಗ್ಗೆ ವಿಚಾರಣೆ ಮಾಡಿ ನನಗೆ ಸಹಿ ಮಾಡು ಎಂದು ಹೇಳಿದರು. ಆಗ ನಾನು ಸಹಿ ಮಾಡಿದ್ದೇನೆ. ಸದರಿ ಸಂದರ್ಭದಲ್ಲಿ ನನ್ನೊಂದಿಗೆ ಚಾಸಾ.1 ಮತ್ತು 3 ರವರು ಇದ್ದರು. ಸದರಿ ಕಾಲಕ್ಕೆ ಪೊಲೀಸರು ಛಾಯ ಚಿತ್ರ ತೆಗೆದಿರುತ್ತಾರೆ. ಸಾಕ್ಷಿಯು ಗುರುತಿಸಿದ ಛಾಯ ಚಿತ್ರಗಳನ್ನು ಈಗಾಗಲೇ ನಿಪಿ. 3 ಮತ್ತು 4 ಎಂದು ಗುರುತಿಸಲಾಗಿದೆ. ಸ್ಥಳದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಜಪ್ತು ಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ಗಲಾಟೆ ದಿನ 1 ನೇ ಆರೋಪಿಯೊಂದಿಗೆ 2 ರಿಂದ 7 ನೇ ಆರೋಪಿತರು ಅಕ್ರಮ ಗುಂಪು ಕಟ್ಟಿಕೊಂಡು ಬಂದು ಚಾಸಾ.1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಕೋಲಿನಿಂದ ಹೊಡೆದಿರುತ್ತಾರೆ ಎಂದರೆ ಸರಿ. ಸದರಿ ಸಂದರ್ಭದಲ್ಲಿ ಇನ್ನೊಂದು ಸಾರಿ ಜಮೀನಿಗೆ ಬಂದರೆ ನಿಮ್ಮನ್ನು ಜೀವ ಸಹಿತ ಬಿಡುವುದಿಲ್ಲ ಎಂದು ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿ. ಪಂಚನಾಮೆ ಕಾಲಕ್ಕೆ ಪೊಲೀಸರು 1 ಕಲ್ಲು ಮತುತ 1 ಕೋಲನ್ನು ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿ. ಸಾಕ್ಷಿಯು ಗುರುತಿಸಿದ ಕಲ್ಲು ಮತ್ತು ಕೋಲನ್ನು ಈಗಾಗಲೇ ಮು.ಮಾ 1 ಮತ್ತು 2 ಎಂದು ಗುರುತಿಸಲಾಗಿದೆ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಪಿ ಎಸ್ ಜೆ ವಕೀಲರಿಂದಃ**

ಗಲಾಟೆ ಸಂದರ್ಭದಲ್ಲಿ ಬಹಳ ಜನ ಸೇರಿದ್ದರು. ಸದರಿಯವರೆಲ್ಲರ ಹೆಸರು ನನಗೆ ಗೊತ್ತಿಲ್ಲ. ನನ್ನ ಕಣ್ಣು ಸರಿಯಾಗಿ ಕಾಣುವುದಿಲ್ಲ ಎಂದರೆ ಸರಿ. 1 ನೇ ಆರೋಪಿ ಮತ್ತು ಅವರ ಮಗ ಚಾಸಾ.1 ರವರಿಗೆ ಹೊಡೆದಿರುತ್ತಾರೆ. ಎಲ್ಲೆಲ್ಲಿ ಹೊಡೆದಿರುತ್ತಾರೆ ಎಂದು ನನಗೆ ಹೇಳಲು ಬರುವುದಿಲ್ಲ. ನಾನು ಪೊಲೀಸರಿಗೆ ಹೇಳಿಕೆ ನೀಡಿಲ್ಲ. ಗಲಾಟೆ ಬಿಡಿಸುವ ಸಂದರ್ಭದಲ್ಲಿ ನನಗೆ ಯಾವುದೇ ಗಾಯ ಆಗಿಲ್ಲ. ಸುಮಾರು ಅರ್ಧ ಗಂಟೆಗಳ ಕಾಲ ಜಗಳ ಆಗಿತ್ತು. ಮು.ಮಾ 1 ಮತ್ತು 2 ರಂತಹ ಕಲ್ಲು ಮತ್ತು ಕೋಲು ದಾರಿಯಲ್ಲಿ ಸಿಗುತ್ತವೆ ಎಂದರೆ ಸರಿ. ನಾನು ಮತ್ತು ಚಾಸಾ.1 ಒಂದೇ ಜನಾಂಗದವರು ಎಂದರೆ ಸರಿಯಲ್ಲ. ನಿಪಿ.2 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿ. ಆರೋಪಿತರು 4 ಜನ ಇದ್ದರು. ಯಾವುದೇ ರೀತಿಯ ಗಲಾಟೆ ಆಗದಿದ್ದರೂ ಸಹ ಚಾಸಾ.1 ರವರು ಆರೋಪಿತರ ವಿರುದ್ಧ ಸುಳ್ಳು ದೂರು ಸಲ್ಲಿಸಿದ್ದಾರೆ ಎಂದರೆ ಸರಿಯಲ್ಲ. ಯಾವುದೇ ಪಂಚನಾಮೆ ಜರುಗಿಸಿಲ್ಲ, ಸ್ಥಳದಲ್ಲಿ ಯಾವುದೇ ಛಾಯ ಚಿತ್ರ ತೆಗೆದಿಲ್ಲ ಎಂದರೆ ಸರಿಯಲ್ಲ. ನಿಪಿ.3 ಮತ್ತು 4 ನ್ನು ಸೃಷ್ಟಿ ಮಾಡಿಕೊಂಡಿದ್ದೇವೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

ಪ್ರಧಾನ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ